## 72. ಯುವ ಸಬಲೀಕರಣ ಕೇಂದ್ರಗಳ ಸ್ಥಾಪನೆ

ರಾಜ್ಯದಾದ್ಯಂತ ಯುವ ಸಬಲೀಕರಣ ಕೇಂದ್ರಗಳನ್ನು ರಚಿಸಿ ವಿದ್ಯಾರ್ಥಿಗಳಿಗೆ ಆನ್‌ಲೈನ್ ಪೋರ್ಟಲ್ ಮೂಲಕ ಒಂದೇ ಸೂರಿನಡಿ ಸಮಗ್ರ ಮಾಹಿತಿ ಒದಗಿಸಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ:ಸಿ.ಎನ್. ಅಶ್ವತ್ಥನಾರಾಯಣ ತಿಳಿಸಿದರು.

ಸಿಎಂ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಶಿಕ್ಷಣ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಯುವ ಸಬಲೀಕರಣ ಕೇಂದ್ರಗಳಲ್ಲಿ ಪ್ರೌಢಶಾಲಾ ಮಟ್ಟದಿಂದಲೇ ವಿದ್ಯಾರ್ಥಿಗಳ ನೋಂದಣಿ ಪ್ರಾರಂಭಿಸಲಾಗುವುದು. ಇದರಿಂದ ಶಾಲೆ–ಕಾಲೇಜಿನಿಂದ ಹೊರಗುಳಿಯುವ ವಿದ್ಯಾರ್ಥಿಗಳನ್ನು ಪತ್ತೆ ಹಚ್ಚಲು ಸಾಧ್ಯ. ಕೈಗಾರಿಕೆಗಳನ್ನು ಇದರ ಜೊತೆ ಸಂಪರ್ಕಿಸಿ ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್, ಉದ್ಯೋಗ ದೊಂಕಿಸುವ ಅವಕಾಶ ಕಲ್ಪಿಸಲಾಗಿದೆ ಎಂದರು. ಕೊರೊನಾ ಕಾರಣ ಆನ್‌ಲೈನ್ ಬೋಧನೆ ಅನುಷ್ಠಾನಕ್ಕೆ ಬರಲಿದ್ದು, ವಿದ್ಯಾರ್ಥಿ–ಶಿಕ್ಷಕರಿಗೆ ಮೈತ್ರಿ ಸಹಾಯವಾಣಿ ಪೋರ್ಟಲ್ ನೆರವಾಗಿದೆ ಎಂದು ಸಿಎಂಗೆ ಉನ್ನತ ಶಿಕ್ಷಣ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ವೆಬ್ ಎಕ್ಸ್, ಸ್ಕೈಪ್ ಹಾಗೂ ಇತರ ವೇದಿಕೆ ಮೂಲಕ 30,000 ಆನ್‌ಲೈನ್ ತರಗತಿ ನಡೆಸಲಾಗಿದೆ. ವಾಟ್ಸ್‌ಆಪ್, ಟೆಲಿಗ್ರಾಂ ಮೂಲಕ ಶೇ.85 ವಿದ್ಯಾರ್ಥಿಗಳಿಗೆ ಇ–ನೋಟ್ಸ್, ಪಿಪಿಟಿ ಹಾಗೂ ಹಳೆಯ ಪ್ರಶ್ನೆ ಪತ್ರಿಕೆ ವಿತರಿಸಲಾಗಿದೆ. ಜ್ಞಾನ ನಿಧಿ ಯು–ಟ್ಯೂಬ್ ಚಾನೆಲ್ ಮೂಲಕ 65 ವಿಷಯಗಳ 7,074 ಬೋಧನಾ ವಿಡಿಯೋ ಅಪ್‌ಲೋಡ್ ಮಾಡಿದ್ದು, 5 ಲಕ್ಷ ವಿದ್ಯಾರ್ಥಿಗಳು ವೀಕ್ಷಿಸಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಉನ್ನತ ಶಿಕ್ಷಣದಲ್ಲಿ ಸಮತೋಲನಕ್ಕಾಗಿ ರಾಜ್ಯದ 13 ವಿಧಾನ ಸಭಾ ಕ್ಷೇತ್ರಗಳಲ್ಲಿ ಸರ್ಕಾರಿ ಕಾಲೇಜು ಇಲ್ಲದ್ದನ್ನು ಗುರುತಿಸಲಾಗಿದೆ. ಹೆಚ್ಚುವರಿ ಕಾಲೇಜಿರುವ ಕ್ಷೇತ್ರಗಳಿಂದ 6 ಪ್ರಥಮ ದರ್ಜೆ ಕಾಲೇಜುಗಳನ್ನು ಈ ಭಾಗಗಳಿಗೆ ಸ್ಥಳಾಂತರಿಸಲಾಗುವುದೆಂದು ಡಿಸಿಎಂ ಹೇಳಿದರು.

**ಶೀಘ್ರದಲ್ಲೇ ಸಮಗ್ರ ನಿರ್ವಹಣಾ ವ್ಯವಸ್ಥೆ:** ಇ–ಆಡಳಿತ ಇಲಾಖೆ ಮೂಲಕ ಅನುಷ್ಠಾನಕ್ಕೆ ತರಲು ಉದ್ದೇಶಿತ 11 ಕೋಟಿ ರೂ. ವೆಚ್ಚದ ವಿಶ್ವವಿದ್ಯಾಲಯ ಹಾಗೂ ಕಾಲೇಜುಗಳ ಸಮಗ್ರ ನಿರ್ವಹಣಾ ವ್ಯವಸ್ಥೆ ಜಾರಿಗೆ ಸಿಎಂ ಅಸ್ತು ಎಂದಿದ್ದು, ಬೆಳಗಾವಿ ಕಿತ್ತೂರು ವಿ.ವಿ.ಸ್ವಾಧೀನದ ಜಮೀನಿನ ಬಗ್ಗೆ ಅರಣ್ಯ ಇಲಾಖೆ ತಗಾದೆಯನ್ನು ಡಿಸಿಎಂ ಪ್ರಸ್ತಾಪಿಸಿದಾಗ ಕೇಂದ್ರ ಅರಣ್ಯ ಸಚಿವ ಪ್ರಕಾಶ್ ಜಾವಡೇಕರ್ ಜೊತೆ ಚರ್ಚಿಸಿ ಬಗೆಹರಿಸಿ ಕೊಡುವೆ ಎಂದು ಮುಖ್ಯಮಂತ್ರಿಯವರು ಭರವಸೆ ನೀಡಿದರು.

ಆಧಾರ:ವಿಜಯವಾಣಿ, ದಿನಾಂಕ:27.05.2020